ಕರ್ನಾಟಕ ಸರ್ಕಾರ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು-560002.
ದೂರವಾಣಿ-080-22213530/22241325 ಇ-ಮೇಲ್ : kanbhavblr@gmail.com ವೆಬ್ ಸೈಟ್: www.k kannadasiri.karnataka.gov.in

DKC-49006/15/2023 ದಿನಾಂಕ:19.09.2023

## ಪತ್ರಿಕಾ ಪ್ರಕಟಣೆ

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣವಾಗಿ ೫೦ ವರ್ಷ ಪೂರ್ಣಗೊಳ್ಳಲಿರುವ ಸುವರ್ಣ ಮಹೋತ್ಸವದ ಸುಸಂದರ್ಭದಲ್ಲಿ "ಕರ್ನಾಟಕ ಸಂಭ್ರಮ ೫೦" "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಎಂಬ ಶೀರ್ಷಿಕೆಯಡಿ ರಾಜ್ಯಾದ್ಯಂತ ವರ್ಷಪೂರ್ತಿ ವೈವಿಧ್ಯಮಯವಾಗಿ, ವರ್ಣಮಯವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಇದಕ್ಕೊಂದು ವಿಶೇಷ ಮೆರುಗು ನೀಡಲು ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಉದ್ದೇಶಿಸಿದೆ. ಕಾರ್ಯಕ್ರಮದ ಸಂಭ್ರಮವನ್ನು ಹೆಚ್ಚಿಸಲು ಕನ್ನಡ ನಾಡು-ನುಡಿ-ಸಂಸ್ಕೃತಿಯನ್ನು ಬಿಂಬಿಸುವ ವಿಶಿಷ್ಟವಾದ ಲಾಂಛನ(ಲೋಗೋ)ವನ್ನು ಬಳಸಲು ತೀರ್ಮಾನಿಸಲಾಗಿದ್ದು, ಆಸಕ್ತರಿಂದ ಸುಂದರವಾದ ಲಾಂಛನ(ಲೋಗೋ)ದ ಮಾದರಿಗಳನ್ನು ಆಹ್ವಾನಿಸಲಾಗಿದೆ. ಆಯ್ಕೆಯಾಗುವ ಮಾದರಿ ಲಾಂಛನಕ್ಕೆ ರೂ ೨೫,೦೦೦/-ಗಳ ಬಹುಮಾನವನ್ನು ನಿಗದಿಪಡಿಸಲಾಗಿದೆ.

ಲಾಂಛನ(ಲೋಗೋ)ದ ಮಾದರಿಯನ್ನು ಕಳುಹಿಸಲು ದಿನಾಂಕ: ೨೦.೦೯.೨೦೨೩ ರಿಂದ ದಿ:೩೦.೦೯.೨೦೨೩ರ ವರೆಗೆ ಅವಕಾಶವಿದ್ದು, ಆಸಕ್ತರು ಈ ಕುರಿತು ಅಗತ್ಯ ಮಾಹಿತಿಗಳನ್ನು ಇಲಾಖೆಯ ಜಾಲತಾಣ https://www.kannadasiri.karnataka.gov.in ದಲ್ಲಿ ಪಡೆಯಬಹುದಾಗಿದೆ.

ನಿರ್ದೇಶಕರು
ಕನ್ನಡಮತ್ತುಸಂಸ್ಕೃತಿಇಲಾಖೆ,
ಬೆಂಗಳೂರು